**ಪ್ರಧಾನ ಸಿವಿಲ್ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೆಗ್ಗಡದೇವನಕೋಟೆ, ಮೈಸೂರು ಜಿಲ್ಲೆ.**

**O.S. No. 243/2025**

**ಸಾಕ್ಷಿಯನ್ನು ದಿನಾಂಕಃ 07.03.2026 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ವಾದಿ ಪರ ಶ್ರೀಮತಿ. ಎಲ್.ಎನ್.ಆರ್. ವಕೀಲರಿಂದಃ**

ಈ ದಾವೆಯಲ್ಲಿ ನಾನು ವಾದಿಯಾಗಿರುತ್ತೇನೆ. ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರ ಸಲ್ಲಿಸಿದ್ದು, ಸದರಿ ಪ್ರಮಾಣ ಪತ್ರದಲ್ಲಿರುವ ಅಂಶಗಳನ್ನು ನಾನೇ ಖುದ್ದಾಗಿ ಬರೆಸಿರುತ್ತೇನೆ ಹಾಗೂ ಅದರಲ್ಲಿರುವ ಅಂಶಗಳು ಸತ್ಯವೆಂದು ಪ್ರಮಾಣಿಕರಿಸುತ್ತೇನೆ. ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ. ನನ್ನ ದಾವೆಯ ಜೊತೆ ಕೆಲವು ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ.

2 ನೇ ಪ್ರತಿವಾದಿ ನೀಡಿದ ಹಿಂಬರಹವನ್ನು ಹಾಜರುಪಡಿಸಿದ್ದು ಅದನ್ನು **ನಿ.ಪಿ.-1** ಎಂದು, 2 ನೇ ಪ್ರತಿವಾದಿ ಜರುಗಿಸಿದ ಮಹಜರ್ ಅನ್ನು ಹಾಜರುಪಡಿಸಿದ್ದು ಅದನ್ನು **ನಿ.ಪಿ.-2** ಎಂದು, ಅಂಗನವಾಡಿ ಕಾರ್ಯಕರ್ತೆ, ನಾಯಕರ ಬೀದಿ, ಸರಗೂರು, ಇವರು ನೀಡಿದ ಜನನ ದಿನಾಂಕದ ಧೃಡೀಕರಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು **ನಿ.ಪಿ.-3** ಎಂದು, ನನ್ನ 10 ನೇ ತರಗತಿ ಮತ್ತು ದ್ವಿತೀಯ ಪಿ.ಯು.ಸಿ. ಅಂಕಪಟ್ಟಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ **ನಿ.ಪಿ.-4** ಮತ್ತು **ನಿ.ಪಿ.-5** ಎಂದು, ನನ್ನ ಪದವಿಯ ಅಂಕಪಟ್ಟಿಯನ್ನು ಹಾಜರುಪಡಿಸಿದ್ದು ಅದನ್ನು **ನಿ.ಪಿ.-6** ಎಂದು, ಪ್ರತಿವಾದಿಗಳಿಗೆ ನೀಡಿದ ನೋಟೀಸ್ ನ ಕಛೇರಿ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು **ನಿ.ಪಿ.-7** ಎಂದು, 10 ಅಂಚೆ ರಶೀದಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ **ನಿ.ಪಿ.-8 ರಿಂದ ನಿ.ಪಿ.-17** ಎಂದು, 08 ಅಂಚೆ ಸ್ವೀಕೃತಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ **ನಿ.ಪಿ.-18 ರಿಂದ ನಿ.ಪಿ.-25 ಮತ್ತು** ನನ್ನ ಆಧಾರ್ ಕಾರ್ಡ್ ಅನ್ನು ಹಾಜರುಪಡಿಸಿದ್ದು ಅದನ್ನು **ನಿ.ಪಿ.-26** ಎಂದು ಗುರುತಿಸಲಾಯಿತು.

**ಪಾಟಿ ಸವಾಲು: 7 ನೇ ಪ್ರತಿವಾದಿ ಪರ ವಕೀಲರು ಸಮಯಾವಕಾಶ ಕೋರಿದ್ದು ಪಾಟೀ ಸವಾಲಿಗಾಗಿ ಸಮಯ ನೀಡಲಾಯಿತು.**

(**ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.**)

**ಓ ಹೇ ಕೇ ಸಾ ಸ ಇ ಒ.,**

**ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**

**ಹೆಗ್ಗಡದೇವನಕೋಟೆ.**